ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

**ಕರ್ನಾಟಕ ವಿಧಾನ ಪರಿಷತ್ತು**

ಸೋಮವಾರ, ದಿನಾಂಕ: 02ನೇ ಮಾರ್ಚ್, 2020

1995 ರಿಂದ 2001ನೇ ಸಾಲಿನಲ್ಲಿ ಪ್ರಾರಂಭವಾದ ಅನುದಾನ ರಹಿತ ಕನ್ನಡ ಮಾಧ್ಯಮ ಶಾಲಾ ಕಾಲೇಜುಗಳ ಬಗ್ಗೆ

ಶ್ರೀ ಮರಿತಿಬ್ಬೇಗೌಡ (ಶಿಕ್ಷಕರ ಕ್ಷೇತ್ರ):-

33 (84) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಮತ್ತು ಸಕಾಲ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ರಾಜ್ಯದಲ್ಲಿ 1995ನೇ ಸಾಲಿನಿಂದ 2001ನೇ ಸಾಲಿನವರೆಗೆ ಪ್ರಾರಂಭವಾಗಿರುವ ಅನುದಾನರಹಿತ ಕನ್ನಡ ಮಾಧ್ಯಮ ಪ್ರಾಥಮಿಕ ಶಾಲೆ, ಪ್ರೌಢಶಾಲೆ ಮತ್ತು ಪದವಿ ಪೂರ್ವ ಕಾಲೇಜುಗಳ ಸಂಖ್ಯೆ ಎಷ್ಟು;

(ಆ) ಈ ಸಂಸ್ಥೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಬೋಧಕ/ಬೋಧಕೇತರರಿಗೆ ಕನಿಷ್ಠ ವೇತನ ನೀಡಲಾಗುತ್ತಿದೆಯೇ;

(ಇ) ಸದರಿ ಸಂಸ್ಥೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವವರಿಗೆ ಸೇವಾ ಭದ್ರತೆ ಇಲ್ಲದೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಈ) ಈ ಸಂಸ್ಥೆಗಳಲ್ಲಿನ ಬೋಧಕ/ಬೋಧಕೇತರರಿಗೆ ವೇತನಾನುದಾನ ನೀಡಲು ಅವಶ್ಯವಿರುವ ಅಂದಾಜು ಮೊತ್ತವೆಷ್ಟು;

(ಉ) ಸದರಿಯವರುಗಳಿಗೆ ವೇತನಾನುದಾನ ನೀಡಲು ಸರ್ಕಾರ ಇದುವರೆವಿಗೆ ಕೈಗೊಂಡ ಕ್ರಮಗಳೇನು ?